ಅ) ಎಂ.ಸಿ.ಸಿ, 'ಬಿ' ಬ್ಲಾಕ್‌ನಲ್ಲಿ 5ನೇ ಮೈನ್, 1ನೇ ಕ್ರಾಸ್ ರಸ್ತೆಗಳು ಸಂಪೂರ್ಣ ಹಾಳಾಗಿದ್ದು, ಇವುಗಳ ದುರಸ್ತಿಗೆ ಸರ್ಕಾರ ಕ್ರಮ ಕೈಗೊಂಡಿದೆಯೆ?

ಆ) ದಾವಣಗೆರೆಯಲ್ಲಿ ಹಾಳಾಗಿರುವ ರಸ್ತೆಗಳನ್ನು ಡಾಂಬರೀಕರಣಗೊಳಿಸಲು ಸರ್ಕಾರ ಕೈಗೊಳ್ಳುವ ಕ್ರಮಗಳೇನು?

ಶ್ರೀ ಡಿ.ಕೆ. ಶಿವಕುಮಾರ್ (ನಗರಾಭಿವೃದ್ಧಿ ಸಚಿವರು) :

ಅ) ಹೌದು

ಆ) ಈ ರಸ್ತೆಗಳಲ್ಲಿರುವ ಗುಂಡಿಗಳನ್ನು ಮುಚ್ಚಲಾಗಿದ್ದು, ರಸ್ತೆಗಳ ದುರಸ್ತಿಗೆ ಅಂದಾಜು ತಯಾರಿಸಿ ಕ್ರಮ ಕೈಗೊಳ್ಳಲಾಗುವುದು.

ಇ) ದಾವಣಗೆರೆಯಲ್ಲಿ ಹಾಳಾಗಿರುವ ರಸ್ತೆಗಳ ಡಾಂಬರೀಕರಣವನ್ನು ಐ.ಡಿ.ಎಸ್.ಎಂ.ಟಿ ಯೋಜನೆಯಲ್ಲಿ ಪ್ರಸ್ತಾಪಿಸಲಾಗಿದ್ದು, ಕಾಮಗಾರಿಗಳು ಪ್ರಗತಿಯಲ್ಲಿವೆ.

**ಬೆಂಗಳೂರು ಮಹಾನಗರ ಪಾಲಿಕೆಗೆ ಬರಬೇಕಾದ ಆಸ್ತಿ ತೆರಿಗೆ**

1604 (532) ಶ್ರೀ ಕಟ್ಟಾ ಸುಬ್ರಮಣ್ಯ ನಾಯ್ಡು (ಶಿವಾಜಿನಗರ) : ಮಾನ್ಯ ಮುಖ್ಯಮಂತ್ರಿಗಳು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ಬೆಂಗಳೂರು ಮಹಾನಗರ ಪಾಲಿಕೆಗೆ ಬರಬೇಕಾದ ಆಸ್ತಿ ತೆರಿಗೆ ಬಾಕಿ ಎಷ್ಟು?

ಆ) ಈ ಬಾಕಿಯನ್ನು ವಸೂಲು ಮಾಡಲು ಕೈಗೊಂಡ ಕ್ರಮಗಳೇನು?

ಇ) ಶಿವಾಜಿನಗರ ವಿಧಾನ ಸಭಾ ಕ್ಷೇತ್ರದಲ್ಲಿ ಬರಬೇಕಾದ ಆಸ್ತಿ ತೆರಿಗೆ ಬಾಕಿ ಎಷ್ಟು?

ಈ) 2002ನೇ ಸಾಲಿನಲ್ಲಿ ಶಿವಾಜಿನಗರ ವಿಧಾನ ಸಭಾ ಕ್ಷೇತ್ರದಲ್ಲಿ ವಸೂಲಾದ ಆಸ್ತಿ ತೆರಿಗೆ ಹಣ ಎಷ್ಟು?

ಶ್ರೀ ಎಸ್.ಎಂ. ಕೃಷ್ಣ (ಮುಖ್ಯಮಂತ್ರಿಗಳು) :

ಅ) ರೂ. 40.00 ಕೋಟಿ (31-3-2002 ರಂದು ಇದ್ದಂತೆ)

ಆ) ನ್ಯಾಯಾಲಯದಲ್ಲಿ ಮೊಕದ್ದಮೆ ಬಾಕಿ ಇರುವ ಹಾಗೂ ಮೇಲ್ಮನವಿ ಪ್ರಾಧಿಕಾರದ ಮುಂದೆ ಬಾಕಿ ಇರುವ ಪ್ರಕರಣಗಳನ್ನು ಹೊರತುಪಡಿಸಿ ಕಂದಾಯ ಬಾಕಿ ಮೊತ್ತದ ವಸೂಲಾತಿಗೆ ಕೆಎಂಸಿ ಕಾಯ್ದೆಯ ಅಡಿಯಲ್ಲಿ ನೋಟೀಸ್‌ಗಳನ್ನು ಜಾರಿ ಮಾಡಿ, ವಸೂಲಾತಿಗೆ ಕ್ರಮ ಜರುಗಿಸಲಾಗುತ್ತಿದೆ.

ಇ) ರೂ. 7.09 ಕೋಟಿಗಳು.

ಈ) ರೂ. 7.38 ಕೋಟಿ (30-6-2002ರವರೆಗೆ)

**ಬೆಂಗಳೂರು ಮಹಾನಗರ ಪಾಲಿಕೆಗೆ ಕೇಂದ್ರದಿಂದ ಬಂದ ಅನುದಾನ**

1605 (533) ಶ್ರೀ ಕಟ್ಟಾ ಸುಬ್ರಮಣ್ಯ ನಾಯ್ಡು (ಶಿವಾಜಿನಗರ) : ಮಾನ್ಯ ಮುಖ್ಯಮಂತ್ರಿಗಳು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) 2001-02ನೇ ಸಾಲಿನಲ್ಲಿ ಬೆಂಗಳೂರು ಮಹಾನಗರ ಪಾಲಿಕೆ ತನ್ನ ಆಯವ್ಯಯದಲ್ಲಿ ಶೇ. 18ರಷ್ಟು ಹಣವನ್ನು ಪರಿಶಿಷ್ಟ ಜಾತಿ : ಪಂಗಡದವರ ಅಭಿವೃದ್ಧಿಗಾಗಿ ಮೀಸಲಾಗಿಟ್ಟಿತ್ತೇ?

ಆ) 2001-02ನೇ ಸಾಲಿನಲ್ಲಿ ಇದಕ್ಕಾಗಿ ಖರ್ಚು ಮಾಡಿದ ಹಣವೆಷ್ಟು?

ಇ) 2001-02ನೇ ಸಾಲಿನಲ್ಲಿ ಶೇ.18ರ ಕಾರ್ಯಕ್ರಮಗಳಿಗಾಗಿ ಬೆಂಗಳೂರು ಮಹಾನಗರ ಪಾಲಿಕೆಗೆ ಕೇಂದ್ರದಿಂದ ಬಂದ ನೆರವು ಎಷ್ಟು?